ಮೊದಲನೇ ಪುಟದಿಂದ

ಪೊಲೀಸರಿಂದ ಶೋಧ

ಆದರೆ, ಅವರ ಮೂಲ ಜಿಲ್ಲೆ ದಕ್ಷಿಣ ಕನ್ನಡದ ಪೊಲೀಸರು ಅಥವಾ ನ್ಯಾಯಾಲಯ ನೋಟಿಸ್ ಜಾರಿ ಮಾಡಿದಾಗ ಜಿಲ್ಲೆಯನ್ನು ಪ್ರವೇಶಿಸಲು ಅವಕಾಶ ನೀಡಲಾಗಿದೆ.

ಗಡೀಪಾರನ್ನು ಪ್ರಶ್ನಿಸಿ ತಿಮರೋಡಿ ಅವರು ಸರಕಾರ ಅಥವಾ ಹೈಕೋರ್ಟ್‌ನಲ್ಲಿ ಮೇಲ್ಮನವಿ ಸಲ್ಲಿಸಲು ಅವಕಾಶವಿದೆ. ಗಡೀಪಾರಿಗೂ ಮೊದಲು ತಿಮರೋಡಿಯನ್ನು ಬಂಧಿಸಿ ಬಳಿಕ ಪೊಲೀಸರ ಸಮ್ಮುಖದಲ್ಲಿ ರಾಯಚೂರು ಮಾನ್ವಿ ಪೊಲೀಸ್ ಠಾಣೆಗೆ ಹಾಜರು ಪಡಿಸುವುದು ಕಾನೂನಾತ್ಮಕ ಪ್ರಕ್ರಿಯೆಯಾಗಲಿದೆ. ಅಲ್ಲಿ ಒಂದು ವರ್ಷ ಪ್ರತಿದಿನ ಬೆಳಿಗ್ಗೆ ಮತ್ತು ಸಂಜೆ ಪೊಲೀಸ್ ಠಾಣೆಗೆ ಹಾಜರಾಗಿ ಸಹಿ ಹಾಕಬೇಕಿದೆ.

ಯಾನ ಮುಗಿಸಿದ ಸರಸ್ವತಿ ಸಮ್ಮಾನ

ಅಲ್ಲಿಂದ ಮೈಸೂರಿಗೆ ಕರೆದೊಯ್ಯಲಾಗುತ್ತದೆ. ಚಾಮುಂಡಿ ಬೆಟ್ಟದ ತಪ್ಪಲಲ್ಲಿ ಬ್ರಾಹ್ಮಣ ಸಂಪ್ರದಾಯದಂತೆ ಅಂತ್ಯ ಸಂಸ್ಕಾರ ನಡೆಯಲಿದೆ ಎಂದು ಅವರ ಕುಟುಂಬದವರು ಮಾಹಿತಿ ನೀಡಿದ್ದಾರೆ.

ಕನ್ನಡದ ಖ್ಯಾತ ಬರಹಗಾರ ಡಾ. ಎಸ್ ಎಲ್ ಭೈರಪ್ಪ ಅವರ ಅಂತಿಮ ದರ್ಶನಕ್ಕೆ, ಬೆಂಗಳೂರಿನ ರವೀಂದ್ರ ಕಲಾಕ್ಷೇತ್ರದ ಆವರಣದಲ್ಲಿ ಗುರುವಾರ ಬೆಳಿಗ್ಗೆ 8.00 ಗಂಟೆಯಿಂದ ಮಧ್ಯಾಹ್ನ 1.00 ಗಂಟೆಯವರೆಗೆ ಅವಕಾಶ ಕಲ್ಪಿಸಲಾಗಿದೆ. ಸಾರ್ವಜನಿಕರು ಪೂರ್ಣಿಮಾ ಥಿಯೇಟರ್ ರಸ್ತೆ ಹಾಗೂ ಜೆ ಸಿ ರಸ್ತೆಯಲ್ಲಿರುವ ರವೀಂದ್ರ ಕಲಾಕ್ಷೇತ್ರದ ಮುಖ್ಯ ಪ್ರವೇಶ ದ್ವಾರದ ಮೂಲಕ ಪ್ರವೇಶಿಸಿ ಅಂತಿಮ ದರ್ಶನದ ನಂತರ ಟೌನ್ ಹಾಲ್ ಗೇಟ್ ಮೂಲಕ ನಿರ್ಗಮಿಸಲು ಅವಕಾಶ ಕಲ್ಪಿಸಿದೆ.

ಬಾಲ್ಯ ಮತ್ತು ಶಿಕ್ಷಣ :

ಭೈರಪ್ಪ ಅವರು ಹಾಸನ ಜಿಲ್ಲೆ ಚನ್ನರಾಯಪಟ್ಟಣ ತಾಲೂಕಿನ ಸಂತೇಶಿವರ ಗ್ರಾಮದಲ್ಲಿ 1934ರ ಆಗಸ್ಟ್ 20ರಂದು ಲಿಂಗಣ್ಣಯ್ಯ ಹಾಗೂ ಗೌರಮ್ಮ ದಂಪತಿ ಪುತ್ರನಾಗಿ ಜನಿಸಿದರು. ಪ್ರಾಥಮಿಕ ಶಿಕ್ಷಣ ಬಾಗೂರು, ನುಗ್ಗೇಹಳ್ಳಿಯಲ್ಲಿ ನಡೆಯಿತು. ಬಳಿಕ ಮೈಸೂರಿನ ಶಾರದಾವಿಲಾಸ ಪ್ರೌಢಶಾಲೆ ಸೇರಿದರು. ಮಹಾರಾಜ ಕಾಲೇಜಿನಲ್ಲಿ ಪದವಿ ಪಡೆದರು. ಮೈಸೂರು ವಿಶ್ವವಿದ್ಯಾಲಯದಲ್ಲಿ ಚಿನ್ನದ ಎರಡು ಪದಕಗಳೊಂದಿಗೆ ಎಂ.ಎ.ತತ್ವಶಾಸ್ತ್ರದಲ್ಲಿ ಪದವಿ ಪಡೆದರು.

ಬರೋಡದ ಸಯ್ಯಾಜಿರಾವ್ ವಿಶ್ವವಿದ್ಯಾಲಯದಲ್ಲಿ ಸತ್ಯ ಮತ್ತು ಸೌಂದರ್ಯ ಪ್ರಬಂಧಕ್ಕೆ ಪಿಎಚ್‌ಡಿ ಪಡೆದರು. ಬಳಿಕ ಹುಬ್ಬಳ್ಳಿ ಕಾಡುಸಿದ್ದೇಶ್ವರ ಕಾಲೇಜು, ಗುಜರಾತ್‌ನ ಸರ್ದಾರ್ ವಲ್ಲಭವಾಯಿ ಪಟೇಲ್ ವಿಶ್ವವಿದ್ಯಾಲಯದಲ್ಲಿ ತತ್ವಶಾಸ್ತ್ರದ ಪ್ರಾಧ್ಯಾಪಕರಾಗಿದ್ದರು.

ದೆಹಲಿಯ ರಾಷ್ಟ್ರೀಯ ಶಿಕ್ಷಣ ಮತ್ತು ತರಬೇತಿ ಸಂಸ್ಥೆಯಲ್ಲಿ 1967ರಿಂದ 1971ರವರೆಗೆ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದರು. ಅಲ್ಲಿಂದ ಮೈಸೂರಿನ ಪ್ರಾದೇಶಿಕ ಶಿಕ್ಷಣ ಕಾಲೇಜಿಗೆ ವರ್ಗವಾದರು. ಅಲ್ಲಿ ತತ್ವಶಾಸ್ತ್ರ ಮತ್ತು ಶಿಕ್ಷಣ ವಿಜ್ಞಾನದ ಪ್ರಾಧ್ಯಾಪಕರಾಗಿ 1991ರಲ್ಲಿ ನಿವೃತ್ತರಾದರು.

ಎಸ್.ಎಲ್.ಭೈರಪ್ಪ ಅವರು ಸಾಹಿತ್ಯ ಕ್ಷೇತ್ರದಲ್ಲಿ ಕಾದಂಬರಿ ಪ್ರಕಾರದತ್ತ ಆಕರ್ಷಿತರಾಗಿದರು. ಹೀಗಾಗಿ ಅವರು ವಿದ್ಯಾರ್ಥಿಯಾಗಿದ್ದಾಗಲೇ ಧರ್ಮಶ್ರೀ ಬರೆದರು. ಇದು 1961ರಲ್ಲಿ ಪ್ರಕಟಗೊಂಡಿತು. ಬಳಿಕ ಹಲವು ಕಾದಂಬರಿಗಳನ್ನು ರಚಿಸಿದರು.

ಭೈರಪ್ಪನವರ ಕಾದಂಬರಿಗಳಾದ ವಂಶವೃಕ್ಷ', ತಬ್ಬಲಿಯು ನೀನಾದೆ ಮಗನೆ', ನಾಯಿನೆರಳು', ಮತದಾನ' ಕೃತಿಗಳು ಚಲನಚಿತ್ರಗಳಾಗಿ ರಾಷ್ಟ್ರಮಟ್ಟದಲ್ಲಿ ಪ್ರಶಸ್ತಿ ಗಳಿಸಿ ಜನಪ್ರಿಯಗೊಂಡಿವೆ. ಗೃಹಭಂಗ' ದೂರದರ್ಶನದಲ್ಲಿ ಧಾರಾವಾಹಿಯಾಗಿ ಮೂಡಿಬಂದು ಎಲ್ಲಾ ಸಹೃದಯರ ಹೃದಯದಲ್ಲಿ ನೆಲೆನಿಂತಿದೆ. ವಂಶವೃಕ್ಷ ಸಿನಿಮಾ ತೆಲುಗಿನಲ್ಲಿ ಅನಿಲ್ ಕಪೂರ್ ನಟನೆಯಲ್ಲಿ ರಿಮೇಕ್ ಆಗಿದೆ. 'ದಾಟು ' ಹಿಂದಿಯಲ್ಲಿ ಟಿವಿ ಧಾರಾವಾಹಿಯಾಗಿದೆ.

ಹಲವು ಪ್ರಶಸ್ತಿಗಳು :

ಕೇಂದ್ರ ಸರ್ಕಾರದ ಪದ್ಮಗೌರವಗಳಾದ ಪದ್ಮಶ್ರೀ ಹಾಗೂ ಪದ್ಮಭೂಷಣ ಎರಡೂ ಪ್ರಶಸ್ತಿಗಳನ್ನು ಪಡೆದ ಕನ್ನಡದ ಕೆಲವೇ ಬರಹಗಾರರಲ್ಲಿ ಭೈರಪ್ಪ ಒಬ್ಬರು. ಬಿರ್ಲಾ ಫೌಂಡೇಶನ್ ನೀಡುವ ಸರಸ್ವತಿ ಸಮ್ಮಾನ್ ಪ್ರಶಸ್ತಿಯನ್ನು ಅವರು ಸ್ವೀಕರಿಸಿದ್ದಾರೆ. ಇದು ಭಾರತದಲ್ಲೇ ಅತಿ ಹೆಚ್ಚಿನ ನಗದು ಮೊತ್ತ ನೀಡುವ (15 ಲಕ್ಷ ರೂ.) ಪ್ರಶಸ್ತಿ ಇದಾಗಿದೆ.

ವಂಶವೃಕ್ಷ ಕಾದಂಬರಿಗೆ 1996ರಲ್ಲಿ ರಾಜ್ಯ ಸಾಹಿತ್ಯ ಅಕಾಡೆಮಿ, ದಾಟು ಕಾದಂಬರಿಗೆ 1975ರಲ್ಲಿ ಕೇಂದ್ರ ಸಾಹಿತ್ಯ ಅಕಾಡೆಮಿ, 1985ರಲ್ಲಿ ಮಾಸ್ತಿ, 2005 ರಲ್ಲಿ ಪಂಪ ಪ್ರಶಸ್ತಿ, 2010ರಲ್ಲಿ ಸರಸ್ವತಿ ಸಮ್ಮಾನ್, 2011ರಲ್ಲಿ ನಾಡೋಜ, 2014ರಲ್ಲಿ ಬೆಟಗೇರಿ ಕೃಷ್ಣಶರ್ಮ ಪ್ರಶಸ್ತಿ, 2017ರಲ್ಲಿ ಕನ್ನಡ ಸಾಹಿತ್ಯ ಪರಿಷತ್ತಿನ ನೃಪತುಂಗ ಪ್ರಶಸ್ತಿ ದೊರೆತಿದೆ.

2014ರಲ್ಲಿ ರಾಷ್ಟ್ರೀಯ ಸಂಶೋಧನಾ ಪ್ರಾಧ್ಯಾಪಕ ಪುರಸ್ಕಾರ. 2015ರಲ್ಲಿ ಸಾಹಿತ್ಯ ಅಕಾಡೆಮಿ ಫೆಲೋಶಿಪ್ ಗೌರವಕ್ಕೆ ಭಾಜನರಾಗಿದ್ದರು. ಕೇಂದ್ರ ಸರ್ಕಾರ 2016ರಲ್ಲಿ ಪದ್ಮಶ್ರೀ, 2023ರಲ್ಲಿ ಪದ್ಮಭೂಷಣ ಪುರಸ್ಕಾರವನ್ನು ನೀಡಿ ಗೌರವಿಸಿದೆ.

ಅಲ್ಲದೆ ಅವರ ಕಾದಂಬರಿಗಳು ಭಾರತದ ವಿವಿಧ ಭಾಷೆಗಳಿಗೆ ಅನುವಾದಗೊಂಡಿವೆ. ವಂಶವೃಕ್ಷ, ಸಾಕ್ಷಿ ಮತ್ತು ಪರ್ವ ಕೃತಿಗಳು ಇಂಗ್ಲಿಷ್‌ಗೆ ಭಾಷಾಂತರಗೊಂಡಿವೆ.

ಮುನ್ನೂರು ಕಾಪು ಸಮಾಜ ಮಾದರಿ

ಇವರ ಈ ಚಟುವಟಿಕೆಗಳು ಅತ್ಯಂತ ಶ್ಲಾಘನೀಯವಾಗಿದೆ. ಈ ರೀತಿ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಸುವ ಮೂಲಕ ಹಬ್ಬ ಹರಿದಿನಗಳನ್ನು ನಿರ್ವಹಿಸುವ ಅಗತ್ಯವಿದೆಂದರು.

ಮುನ್ನೂರು ಕಾಪು ಸಮಾಜದಿಂದ ಆಯೋಜಿಸುವ ಮುಂಗಾರು ಹಬ್ಬವನ್ನು ರೈತರ ಹಬ್ಬವನ್ನಾಗಿ ಆಚರಣೆ ಮಾಡುವುದರ ಮೂಲಕ ರಾಜ್ಯದ ಗಮನ ಸೆಳೆದು ರಾಜ್ಯದಲ್ಲೇ ಮುನ್ನೂರು ಕಾಪು ಮಾದರಿಯಾಗಿದೆ ಎಂದರು. ಪಾಪಾರೆಡ್ಡಿ ನೇತೃತ್ವದಲ್ಲಿ ಮುನ್ನೂರು ಕಾಪು ಸಮಾಜ ಮುಂಗಾರು ಹಬ್ಬಕ್ಕೆ ಮಾತ್ರ ಸೀಮಿತವಾಗದೆ ಹಿಂದೂ ಧರ್ಮದ ಜನಪ್ರಿಯ ಹಬ್ಬವಾದ ನವರಾತ್ರಿ ಉತ್ಸವವನ್ನು ಅತ್ಯಂತ ಅದ್ದೂರಿ ಮತ್ತು ವೈಭವೀಕರಣದಿಂದ ಆಚರಣೆ ಮಾಡುತ್ತಿದೆ ಅವರ ಸಾಮಾಜಿಕ ಕಾರ್ಯ ಶ್ಲಾಘನೀಯ ಎಂದರು.

ನವರಾತ್ರಿ ಹಬ್ಬದ 8 ದಿನಗಳಲ್ಲಿ ವಿವಿಧ ಪ್ರತಿಭೆಗಳಿಗೆ ಉತ್ತಮ ವೇದಿಕೆಯನ್ನು ಕಲ್ಪಿಸುವುದರ ಮೂಲಕ ರಾಯಚೂರು ಜನತೆ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಕಣ್ತುಂಬಿಸಿಕೊಳ್ಳುವಂತೆ ಮಾಡುವ ಕೀರ್ತಿ ಮುನ್ನೂರು ಕಾಪು ಸಮಾಜಕ್ಕೆ ಸಲ್ಲುತ್ತದೆ ಎಂದರು. ನಶಿಸಿ ಹೋಗುತ್ತಿರುವ ಸಾಂಸ್ಕೃತಿಕ ಪರಂಪರೆಯನ್ನು ರಕ್ಷಣೆ ಮಾಡುವಲ್ಲಿ ಮುನ್ನೂರು ಕಾಪು ಸಮಾಜ ಮುಂಚೂಣಿಯಲ್ಲಿದೆ ಎಂದರು. ಮುನ್ನೂರು ಕಾಪು ಸಮಾಜ ಇತರೇ ಸಮಾಜಕ್ಕೆ ಮಾದರಿಯಾಗಿದೆ. ಎಲ್ಲ ರಂಗದಲ್ಲಿ ಮುನ್ನೂರು ಕಾಪು ಸಮಾಜ ಅಭಿವೃದ್ಧಿ ಹೊಂದಿದೆ ಎಂದು ಶ್ಲಾಘಿಸಿದರು.

ನಂತರ ನರಸಿಂಹಲು ಮಾಡಗಿರಿ ಅವರು ಮಾತನಾಡಿ, ಮುನ್ನೂರು ಕಾಪು ಸಮಾಜ ರಾಜ್ಯ ಸೇರಿ ಜಿಲ್ಲೆಯಲ್ಲಿ ಬಲಿಷ್ಠ ಸಮಾಜವಾಗಿ ಗುರುತಿಸಿಕೊಂಡಿದೆ.ಮುನ್ನೂರು ಕಾಪು ಸಮಾಜದ ಹಿರಿಯ ಮುಖಂಡ ಪಾಪಾರೆಡ್ಡಿ ಅವರ ನೇತೃತ್ವದಲ್ಲಿ ಮುನ್ನೂರು ಕಾಪು ಸಮಾಜ ಸಾಂಸ್ಕೃತಿಕ ರಾಯಭಾರಿಯಾಗಿ ಹೆಗ್ಗಳಿಕೆ ಪಡೆದುಕೊಂಡಿದೆ.

ಮೊದಲ ದಿನದ ಕಾರ್ಯಕ್ರಮದಲ್ಲಿ ಶಾಲಾ, ಕಾಲೇಜು ಮಕ್ಕಳು ಅತ್ಯಂತ ಅದ್ಭುತವಾದ ಸಾಂಸ್ಕೃತಿಕ ಕಾರ್ಯಕ್ರಮ ನಡೆಸಿಕೊಟ್ಟರು. ನವರಾತ್ರಿ ಉತ್ಸವದ ಧಾರ್ಮಿಕ ಚರಿತ್ರೆಯ ಕಥನಗಳೊಂದಿಗೆ ನೃತ್ಯರೂಪಕಗಳನ್ನು ಆಯೋಜಿಸಲಾಗಿತ್ತು. ನೃತ್ಯ ರೂಪಕಗಳು ಸಭಿಕರ ಗಮನ ಸೆಳೆಯಿತು. ಮಕ್ಕಳ ವೃತ್ತಕ್ಕೆ ಪ್ರೇಕ್ಷಕರು ಕರತಾಡನ ಮಾಡಿ, ಸಂತಸ ವ್ಯಕ್ತಪಡಿಸಿದರು. ಮೊದಲ ದಿನದ ಈ ಕಾರ್ಯಕ್ರಮ ಭಾರೀ ಜನಮನ್ನಣೆಗೆ ಸಾಕ್ಷಿಯಾಗಿತ್ತು.

ಉಪನ್ಯಾಸಕರಾಗಿ ಆಗಮಿಸಿದ ಸಾಹಿತಿ ಅಯ್ಯಪ್ಪ ಹುಡಾ ಅವರು ಮಾತನಾಡಿ, ಮುನ್ನೂರು ಕಾಪು ಸಮಾಜ ನವರಾತ್ರಿ ಉತ್ಸವಕ್ಕೆ ತನ್ನದೇ ಆದ ಇತಿಹಾಸವನ್ನು ಹೊಂದಿದೆ.ಕಲಾವಿದರಿಗೆ ಮತ್ತು ಸಾಹಿತಿಗಳಿಗೆ ಪ್ರೋತ್ಸಾಹಿಸುವ ಮುನ್ನೂರು ಕಾಪು ಸಮಾಜದ ಜನಪ್ರಿಯವಾಗಿ ಶ್ರೀಮಂತಿಕೆ ಹೊಂದಿದೆ.ನವರಾತ್ರಿ ಉತ್ಸವದ ಬಗ್ಗೆ ವಿಸ್ತಾರವಾಗಿ ವಿವರಿಸಿದರು.

ಜಿ. ಶೇಖರ್‌ರೆಡ್ಡಿ ಅವರು ಕಾರ್ಯಕ್ರಮಕ್ಕೆ ಸ್ವಾಗತ ಕೋರಿದರು. ಈ ಸಂದರ್ಭದಲ್ಲಿ ಮುನ್ನೂರು ಕಾಪು ಸಮಾಜದ ಹಿರಿಯ ಮುಖಂಡ ಮಾಜಿ ಶಾಸಕ ಎ.ಪಾಪಾರೆಡ್ಡಿ, ಸಮಾಜದ ಅಧ್ಯಕ್ಷ ಬೆಲ್ಲಂ ನರಸರೆಡ್ಡಿ, ಉಟ್ಕೂರು ಕೃಷ್ಣಮೂರ್ತಿ, ಗದಾರ್,ಬೆಟ್ಟಪ್ಪ, ಕಡಗೋಳ್ ಆಂಜನೇಯ, ಬಂಗಿ ನರಸರೆಡ್ಡಿ,ಎನ್ ಶ್ರೀನಿವಾಸ್ ರೆಡ್ಡಿ, ಗುಡ್ಸಿ ಪ್ರತಾಪ್ ರೆಡ್ಡಿ, ನರಸಿಂಹಲು ಮಾಡಗಿರಿ, ಎಸ್. ಜನಾರ್ದನ ರೆಡ್ಡಿ, ಬಿ. ಶೇಖರ್‌ರೆಡ್ಡಿ, ಪುಂಡ್ಲ ರಾಜೇಂದ್ರರೆಡ್ಡಿ, ಮುನ್ನೂರು ಕಾಪು ಸಮಾಜದ ಮುಖಂಡರು ಸೇರಿದಂತೆ ಉಪಸ್ಥಿತರಿದ್ದರು.

39 ಮುಖಂಡರಿಗೆ ಅವಕಾಶ

ಉಳಿದಂತೆ ಈ ಕೆಳಗಿನಂತೆ ವಿವಿಧ ನಿಗಮ ಮಂಡಳಿಗಳ ಅಧ್ಯಕ್ಷರನ್ನು ನೇಮಿಸಲಾಗಿದೆ.
ಪಿ.ರಘು-ರಾಜ್ಯ ಸಫಾಯಿ ಕರ್ಮಚಾರಿ ಆಯೋಗ
ಅರುಣ್ ಪಾಟೀಲ್-ವಾಯುವ್ಯ ಸಾರಿಗೆ ನಿಗಮ
ಶಿವಲೀಲಾ ಕುಲಕರ್ಣಿ-ನಗರ ನೀರು ಸರಬರಾಜು ಮಂಡಳಿ
ವಡ್ನಾಳ್ ಜಗದೀಶ್-ಜೀವ ವೈವಿಧ್ಯ ಮಂಡಳಿ
ಮುರಳಿ ಅಶೋಕ್-ರಾಜ್ಯ ಸಫಾಯಿ ಕರ್ಮಚಾರಿ ಅಭಿವೃದ್ಧಿ ನಿಗಮ
ಡಾ.ಮೂರ್ತಿ-ರಾಜ್ಯ ಎಸ್ಸಿ-ಎಸ್ಟಿ ಆಯೋಗ
ಕರ್ನಲ್ ಮಲ್ಲಿಕಾರ್ಜುನ್-ಮಾಜಿ ಸೈನಿಕರ ಕ್ಷೇಮಾಭಿವೃದ್ಧಿ ಮಂಡಳಿ
ಡಾ.ಬಿ.ಸಿ.ಮುದ್ದುಗಂಗಾಧರ-ರಾಜ್ಯ ಮಾವು ಅಭಿವೃದ್ಧಿ ನಿಗಮ
ಸರ್ಲೆಟ್ ಪಿಂಟೂ-ಪರಿಸರ ಸ್ನೇಹಿ ಪ್ರವಾಸೋದ್ಯಮ ಮಂಡಳಿ
ಮರೋಜಿರಾವ್-ಮಾರಾಟ ಅಭಿವೃದ್ಧಿ ನಿಗಮ
ಎಂ.ಎ.ಗಫೂರ್-ಕರಾವಳಿ ಅಭಿವೃದ್ಧಿ ಪ್ರಾಧಿಕಾರ
ಕೆ.ಹರೀಶ್ ಕುಮಾರ್-ಮೆಸ್ಕಾಂ
ಎಂ.ಸಂಪಂಗಿ-ಉಗ್ರಾಣ ಅಭಿವೃದ್ಧಿ ನಿಗಮ.
ವೈ.ಸಯೀದ್ ಅಹ್ಮದ್-ದೇವರಾಜು ಅರಸು ಟ್ರಕ್ ಟರ್ಮಿನಲ್
ಮಹೇಶ್-ಕಾಡುಗೊಲ್ಲ ಅಭಿವೃದ್ಧಿ ನಿಗಮ
ಮಂಜಪ್ಪ-ಬಯಲು ಸೀಮೆ ಅಭಿವೃದ್ಧಿ ನಿಗಮ
ಧರ್ಮಣ್ಣ-ಉಪ್ಪಾರ ಅಭಿವೃದ್ಧಿ ನಿಗಮ
ಆಗ ಸುಲ್ತಾನ್-ಕೇಂದ್ರ ಪರಿಹಾರ ಸಮಿತಿ
ಎಸ್.ಜಿ.ನಂಜಯ್ಯ ಮಠ-ರಾಜ್ಯ ಕೈಗಾರಿಕೆ ಮೂಲಭೂತ ಅಭಿವೃದ್ಧಿ ನಿಗಮ
ಅಂಜನಪ್ಪ-ಬೀಜ ನಿಗಮ
ನೀಲಕಂಠ ಮೂಳೆ-ಕಲ್ಯಾಣ ಕರ್ನಾಟಕ ಸಾರಿಗೆ
ಬಾನು ಹೊನ್ನನಾಯಕ್-ಕಲಬುರ್ಗಿ ಕಾಡಾ
ಯುವರಾಜ್ ಕದಂ-ಮಲಪ್ರಭಾ ಕಾಡಾ
ಅನಿಲ್ ಕುಮಾರ್ ಜಂಬರ್-ತೊಗರಿ ಅಭಿವೃದ್ಧಿ ಮಂಡಳಿ
ಪ್ರವೀಣ್ ಹರವಾಳ್-ಜೆಸ್ಕಾಂ
ಮಂಜುನಾಥ್ ಪೂಜಾರಿ-ನಾರಾಯಣಗುರು ಅಭಿವೃದ್ಧಿ ನಿಗಮ
ಸೈಯದ್ ಮಹ್ಮದ್ ಕೃಷ್ಣಿ-ದ್ವಿದಳ ಧಾನ್ಯ ಅಭಿವೃದ್ಧಿ ನಿಗಮ
ಎಂ.ಎಸ್.ಮುಕ್ತರಾಜು-ಸವಿತಾ ಅಭಿವೃದ್ಧಿ ನಿಗಮ
ನಂಜಪ್ಪ-ಮಡಿವಾಳ ಅಭಿವೃದ್ಧಿ ನಿಗಮ, ವಿಶ್ವಾಸ್ ದಾಸ್-ಗಾಣಿಗ ಅಭಿವೃದ್ಧಿ ನಿಗಮ
ಆರ್.ಎಸ್.ಸತ್ಯನಾರಾಯಣ-ಮದ್ಯಪಾನ ಸಂಯಮ ಮಂಡಳಿ
ಗಂಗಾಧರ್-ರೇಷ್ಮೆ ಮಾರುಕಟ್ಟೆ ಮಂಡಳಿ, ಶಿವಪ್ಪ-ಹಾಸನ ಅಭಿವೃದ್ಧಿ ಪ್ರಾಧಿಕಾರ
ಬಿ.ಎಸ್.ಕೌಲಗಿ-ಲಿಂಬೆ ಅಭಿವೃದ್ಧಿ ಮಂಡಳಿ
ಶ್ರೀನಿವಾಸ್ ವೇಲು-ಕುಂಬಾರ ಅಭಿವೃದ್ಧಿ ನಿಗಮ, ಸೈಯದ್ ಟಿಕ್ಕಳಿ -ಕನಿಷ್ಠ ವೇತನ ಮಂಡಳಿ
ಚೇತನ್‌ಗೌಡ-ಕೈಮಗ್ಗ ಮೂಲಸೌಲಭ್ಯ ಮಂಡಳಿ
ಶರಣಪ್ಪ ಸದಲಾಪುರ್-ಕೃಷಿ ಉತ್ಪನ್ನ ಸಂಸ್ಕರಣ ಮಂಡಳಿ
ಲಾವಣ್ಯ ಬಲಾವ್ ಜೈನ್-ಬೀಜ ಮತ್ತು ಸಾವಯವ ಪ್ರಮಾಣೀಕರಣ ಸಂಸ್ಥೆ.

ಹಿಂದುಳಿದವರಿಗಾಗಿ 10 ಅಂಶಗಳ ಸಂಕಲ್ಪ

ಪಂಚಾಯತ್‌ಗಳು ಮತ್ತು ಪುರಸಭೆಗಳಲ್ಲಿ ಈ ಸಮುದಾಯಗಳಿಗೆ ಮೀಸಲಾತಿಯನ್ನು ಶೇ.20 ರಿಂದ ಶೇ.30ಕ್ಕೆ ಹೆಚ್ಚಿಸುವುದು, ಶಿಕ್ಷಣ ಸಂಸ್ಥೆಗಳು ಮತ್ತು ಸರ್ಕಾರಿ ಒಪ್ಪಂದಗಳಲ್ಲಿ ಅವರಿಗೆ ಪ್ರತ್ಯೇಕ ಕೋಟಾ ನಿಗದಿ ಮಾಡುವುದು, ಜಾತಿ ಪಟ್ಟಿಗಳನ್ನು ಪರಿಶೀಲಿಸಲು ಸಮಿತಿ ರಚಿಸುವುದು ಸೇರಿ ಅತಿ ಹಿಂದುಳಿದ ವರ್ಗ (ಇಬಿಸಿ) ಕೇಂದ್ರೀಕರಿಸಿ ಅವರ ಬಲವರ್ಧನೆಗೆ ಕಾರ್ಯಕ್ರಮ ಪ್ರಸ್ತಾಪಿಸಲಾಗಿದೆ.

ಚುನಾವಣಾ ಅಕ್ರಮದ ಬಗ್ಗೆ ಖಂಡನೆ : ಚುನಾವಣಾ ಅಕ್ರಮದ ಬಗ್ಗೆ ಇಂದಿನ ಸಿಡಬ್ಲ್ಯೂಸಿ ಸಭೆಯಲ್ಲಿಯೂ ವ್ಯಾಪಕ ಚರ್ಚೆಯಾಗಿ ಕೇಂದ್ರದ ಆಡಳಿತಾರೂಢ ಎನ್ಡಿಎ ವಿರುದ್ಧ ತೀವ್ರ ಟೀಕೆ ಮಾಡಿದರಲ್ಲದೆ, ವ್ಯಾಪಕ ಚುನಾವಣಾ ಅಕ್ರಮಗಳು ಸಾಂಸ್ಥಿಕ ವ್ಯವಸ್ಥೆಯನ್ನೇ ಬುಡಮೇಲು ಮಾಡುವ ಕೃತ್ಯ ಎಂದು ಆರೋಪಿಸಿದರು.

ಸಭೆಯ ಬಳಿಕ ಮಾತನಾಡಿದ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಜೈರಾಮ್ ರಮೇಶ್, 'ಚುನಾವಣಾ ಅಕ್ರಮಗಳ ಕುರಿತು ವ್ಯಾಪಕ ಚರ್ಚೆ ನಡೆಸಲಾಯಿತು. ಬೆಂಗಳೂರಿನ ಮಹದೇವಪುರ ವಿಧಾನಸಭಾ ಕ್ಷೇತ್ರದ ಅಕ್ರಮದಿಂದ ಆರಂಭಗೊಂಡಿದೆ. ಮುಂದಿನ ತಿಂಗಳು ಮತಗಳ್ಳತನದ ಮಿನಿ-ಹೈಡ್ರೋಜನ್ ಬಾಂಬ್, ಹೈಡ್ರೋಜನ್ ಬಾಂಬ್, ಪ್ಲುಟೋನಿಯಂ ಬಾಂಬ್ ಮತ್ತು ಇತರ ಬಾಂಬ್‌ಗಳನ್ನು ವಿವಿಧ ಸ್ಥಳಗಳಲ್ಲಿ ಬೀಳಿಸಲಾಗುವುದು ಎಂದು ರಾಹುಲ್ ಸಭೆಯಲ್ಲಿ ಹೇಳಿದ್ದಾರೆ' ಎಂದು ತಿಳಿಸಿದರು.

'ಅತಿ ಹಿಂದುಳಿದ ನ್ಯಾಯ ನಿರ್ಣಯ' ಸಂಕಲ್ಪ ಪತ್ರ ಬಿಡುಗಡೆ ಬಳಿಕ ಮಾತನಾಡಿದ ರಾಹುಲ್‌ಗಾಂಧಿ, ನಾನು ಮತಗಳ್ಳತನದ ಹೈಡ್ರೋಜನ್ ಬಾಂಬ್ ಬಗ್ಗೆ ಈಗಾಗಲೇ ಹೇಳಿದ್ದೇನೆ. ಅದು ಬರುತ್ತಿದೆ... 'ಮತ ಕಳ್ಳತನ'ದ ಹೈಡ್ರೋಜನ್ ಬಾಂಬ್ ಬಂದ ನಂತರ ಬಿಜೆಪಿಯ ಸತ್ಯವು ಇಡೀ ದೇಶಕ್ಕೆ ಬಹಿರಂಗಗೊಳ್ಳುತ್ತದೆ. ಅವರು ದೇಶದಲ್ಲಿ ಏನು ಮಾಡಿದ್ದಾರೆ ಮತ್ತು ಬಿಹಾರದಲ್ಲಿ ಏನು ಮಾಡಲು ಪ್ರಯತ್ನಿಸಿದ್ದಾರೆ ಎಂಬುದು ಜನರಿಗೆ ತಿಳಿಯಲಿದೆ ಎಂದು ರಾಹುಲ್ ಹೇಳೀದ್ದಾರೆಂದು ಜೈರಾಮ್ ರಮೇಶ್ ಹೇಳಿದರು.

ಭಾರತವು ಆತ್ಮವಂಚನೆಯ ನೆರಳಿನಲ್ಲಿದೆ : ಸಿಎಂ

ಸಿಡಬ್ಲ್ಯೂಸ್‌ಇ ಸಭೆಯಲ್ಲಿ ಭಾಗವಹಿಸಿದ್ದ ಮುಖ್ಯಮಂತ್ರಿ ಸಿದ್ದರಾಮಯ್ಯ, ಅನ್ಯಾಯದ ವಿರುದ್ಧ ಸದಾ ಎದ್ದುನಿಂತ ಪಾಟ್ನಾ ಭೂಮಿಯಲ್ಲಿ ಇಂದು ನಿಮ್ಮ ಮುಂದೆ ನಿಂತಿದ್ದೇನೆ. ನಮ್ಮ ಪ್ರಜಾಪ್ರಭುತ್ವವೇ ಅಪಾಯದಲ್ಲಿರುವ ಸಂದರ್ಭದಲ್ಲಿ ಇಂದಿನ ಕಾಂಗ್ರೆಸ್ ಕಾರ್ಯಕಾರಣಿ ಸಭೆ ಬಹಳ ಮಹತ್ವ ಪಡೆದಿದೆ ಎಂದು ಹೇಳಿದರು.

ಸಂವಿಧಾನದ ಮೂಲ ತತ್ವಗಳಾದ ಸ್ವಾತಂತ್ರ್ಯ, ಸಮಾನತೆ, ಭ್ರಾತೃತ್ವ, ಮತ್ತು ನ್ಯಾಯವನ್ನು ಪ್ರಧಾನಿ ನರೇಂದ್ರ ಮೋದಿ, ಗೃಹ ಸಚಿವ ಅಮಿತ್ ಶಾ, ಬಿಜೆಪಿ, ಮತ್ತು ಅವರ ಸಿದ್ಧಾಂತದ ಗುರುಗಳಾದ ಆರ್‌ಎಸ್‌ಎಸ್ ಹತ್ತಿಕ್ಕುತ್ತಿವೆ. ಭಾರತವು ಇಂದು ಆತ್ಮವಂಚನೆಯ ನೆರಳಿನಲ್ಲಿ ಬದುಕುತ್ತಿದೆ. ಸಂಸ್ಥೆಗಳನ್ನು ವಶಪಡಿಸಿಕೊಂಡು, ಸ್ವಾತಂ